**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಟ್ಟಡಗಳು, ನೃಪತುಂಗ ರಸ್ತೆ, ಬೆಂಗಳೂರು-560001**

ಸಂಖ್ಯೆ: ಪ್ರಾಶಿಅ/ಆರ್.ಟಿ.ಇ/ಪ್ರ.ಪ್ರ.ಪೂ.ಸಿ 18-19/01 /2017-18 ದಿನಾಂಕ: 05.02.2018

**: : ಸುತ್ತೋಲೆ : :**

ವಿಷಯ:-2018-19 ನೇ ಸಾಲಿಗೆ ಶಿಕ್ಷಣ ಹಕ್ಕು ಕಾಯಿದೆ-2009 ರ ಸೆಕ್ಷನ್ 12(1)(ಬಿ) ಮತ್ತು ಸೆಕ್ಷನ್ 12(1) (ಸಿ)ಅಡಿ ಪ್ರವೇಶ ಪ್ರಕ್ರಿಯೆ.

ಉಲ್ಲೇಖ:-1. ಉಚಿತ ಮತ್ತು ಕಡ್ಡಾಯ ಶಿಕ್ಷಣ ಮಕ್ಕಳ ಹಕ್ಕು ಕಾಯಿದೆ-2009.
2. ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ನಿಯಮಗಳು-2012.
3. ಸರ್ಕಾರದ ಆದೇಶ ಸಂಖ್ಯೆ: ಇಡಿ 51 ಪಿಜಿಸಿ 2016 ದಿನಾಂಕ: 08.02.2016
4. ಸರ್ಕಾರದ ಆದೇಶ ಸಂಖ್ಯೆ: ಇಡಿ 608 ಪಿಜಿಸಿ 2016 ದಿನಾಂಕ: 12.12.2016
5. ಸರ್ಕಾರದ ಆದೇಶ ಸಂಖ್ಯೆ: ಇಡಿ 204 ಪಿಜಿಸಿ 2017 ದಿ: 04.03.2017. ಮತ್ತು ದಿನಾಂಕ: 06.03.2017
6. ಈ ಕಛೇರಿಯ ಸುತ್ತೋಲೆ ಸಮಸಂಖ್ಯೆ: ದಿ: 16.12.2017
7. ಸರ್ಕಾರದ ಆದೇಶ ಸಂಖ್ಯೆ: ಇಡಿ 36 ಪಿಜಿಸಿ 2018 ದಿ: 23.1.2018.
8. ಈ ಕಛೇರಿಯ ಸುತ್ತೋಲೆ ಸಮಸಂಖ್ಯೆ: ದಿ: 27.01.2018

**********

2018-19 ನೇ ಸಾಲಿನಲ್ಲಿ ಶಿಕ್ಷಣ ಹಕ್ಕು ಕಾಯಿದೆಯ ಸೆಕ್ಷನ್ 12(1) (ಬಿ) ಮತ್ತು 12(1)(ಸಿ) ಅಡಿ ಪ್ರವೇಶ ಪ್ರಕ್ರಿಯೆ ನಡೆಸಲು ಪರಿಷ್ಕೃತ ತಂತ್ರಾಂಶ ಅಭಿವೃದ್ಧಿಪಡಿಸಲಾಗಿದೆ. ಪ್ರವೇಶ ಪ್ರಕ್ರಿಯೆಗೆ ಸಂಬಂಧಿಸಿದಂತೆ ಉಲ್ಲೇಖ(8) ರಲ್ಲಿ ಸುತ್ತೋಲೆ ಹಾಗೂ ವೇಳಾಪಟ್ಟಿಯನ್ನು ಹೊರಡಿಸಲಾಗಿರುತ್ತದೆ. 2017-18 ನೇ ಸಾಲಿನಲ್ಲಿ ಕೆಲವು ಜನವಸತಿ ಪ್ರದೇಶಗಳು ಕೈಬಿಟ್ಟು ಹೋಗಿರುವ ಬಗ್ಗೆ ಹಲವಾರು ದೂರುಗಳು ಬಂದಿರುವ ಹಿನ್ನೆಲೆಯಲ್ಲಿ ಇಂತಹ ಲೋಪಗಳಿಗೆ ಅವಕಾಶ ಮಾಡಿಕೊಡದಂತೆ ಈ ಕೆಳಕಂಡ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡು ಸಾಫ್ಟ್ ವೇರ್ ಡೆವಲಪ್‌ಮೆಂಟ್ ಸೆಂಟರ್‌ನಿಂದ ಬಿಡುಗಡೆಯಾಗಿರುವ ತಂತ್ರಾಂಶದ ನಿಗದಿತ ನಮೂನೆಯಲ್ಲಿ ಸೂಕ್ತ ಮಾಹಿತಿಯನ್ನು ನಮೂದಿಸುವುದು.

1. ನೆರೆಹೊರೆ ಶಾಲೆಗಳ ಮ್ಯಾಪಿಂಗ್‌ನ್ನು ತ್ವರಿತವಾಗಿ ಪೂರ್ಣಗೊಳಿಸಿ ಯಾವುದೇ ಲೋಪಗಳಿಗೆ ಅವಕಾಶ ಮಾಡಿಕೊಡದಂತೆ ಕೈಬಿಟ್ಟು ಹೋಗಿರುವ ಎಲ್ಲಾ ಜನವಸತಿ ಪ್ರದೇಶಗಳನ್ನು ಸಂಬಂಧಿಸಿದ ವಾರ್ಡ್ ಅಥವಾ ಕಂದಾಯ ಗ್ರಾಮಕ್ಕೆ ಸೇರ್ಪಡೆ ಮಾಡುವುದು.
2. ನೆರೆ ಹೊರೆ ಪ್ರದೇಶಗಳನ್ನು ಗುರುತಿಸುವಾಗ ಅಲ್ಪಸಂಖ್ಯಾತವಲ್ಲದ ಅನುದಾನ ರಹಿತ ಶಾಲೆಗಳು ಮಾನ್ಯತೆ ಪಡೆದಿರುವ ಬಗ್ಗೆ ಖಚಿತಪಡಿಸಿಕೊಳ್ಳುವುದು. (2016-17 ಹಾಗೂ 2018-19 ಸಾಲುಗಳ ಶುಲ್ಕ ಮರುಪಾವತಿ ತಂತ್ರಾಂಶದಲ್ಲಿ ಶಾಲೆಗಳ ಮಾನ್ಯತೆ ನವೀಕರಣ ಇಲ್ಲವೆಂದು ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಲ್ಲಿ ರಿಜೆಕ್ಟ್ ಮಾಡುತ್ತಿರುವುದು ಕಂಡುಬರುತ್ತಿದ್ದು, ಇದೀಗ ಮಾನ್ಯತೆಗಾಗಿ ಅರ್ಜಿ ಸಲ್ಲಿಸುತ್ತಿರುವುದನ್ನು ಆಯುಕ್ತಾಲಯವು ಗಂಭೀರವಾಗಿ ಪರಿಗಣಿಸಿದೆ. ಇಂತಹ ಶಾಲೆಗಳನ್ನು ಪ್ರವೇಶ ಪ್ರಕ್ರಿಯೆಗೆ ನೆರೆಹೊರೆ ಶಾಲೆಗಳ ಪಟ್ಟಿಯಲ್ಲಿ ಸೇರ್ಪಡೆ ಮಾಡುವಾಗಲೇ ಖಚಿತಪಡಿಸಿಕೊಳ್ಳತಕ್ಕದ್ದು.
3. ಮುಚ್ಚಿರುವ ಹಾಗೂ ಮುಚ್ಚಲ್ಪಡುತ್ತಿರುವ ಶಾಲೆಗಳ ಮಾಹಿತಿಯನ್ನು ನಿಖರವಾಗಿ ಪರಿಶೀಲಿಸಿ ಅಗತ್ಯವಿದ್ದಲ್ಲಿ ಕೈಬಿಡುವುದು.

4. ಅಲ್ಪಸಂಖ್ಯಾತ ಶಾಲೆಗಳಾಗಿದ್ದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ಅಂತಹ ಘೋಷಣಾ ಪತ್ರಗಳನ್ನು ದೃಢೀಕರಿಸಿ ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡಲು ಕ್ರಮ ಕೈಗೊಳ್ಳುವುದು. ಅಲ್ಪಸಂಖ್ಯಾತ ಶಾಲೆಗಳನ್ನು ಆರ್.ಟಿ.ಇ ಪಟ್ಟಿಯಿಂದ ಕೈಬಿಡಲಾಗಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳುವುದು.

ಮೇಲ್ಕಂಡ ಎಲ್ಲಾ ಕ್ರಮಗಳನ್ನು 2 ದಿನಗಳೊಳಗಾಗಿ ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವುದು. ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಲ್ಲಿ ಕ್ರಮ ವಹಿಸುತ್ತಿರುವ ಬಗ್ಗೆ ಉಪನಿರ್ದೇಶಕರು ಮೇಲ್ವಿಚಾರಣೆ ನಡೆಸಿ ಮ್ಯಾಪಿಂಗ್ ಕಾರ್ಯ ತ್ವರಿತವಾಗಿ ಆಗುವಲ್ಲಿ ಸೂಕ್ತ ನಿರ್ದೇಶನ ನೀಡತಕ್ಕದ್ದು.

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)

**ರವರಿಗೆ,**

(1) ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಸೂಕ್ತ ಕ್ರಮಕ್ಕಾಗಿ

(2) ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ (ಉಪನಿರ್ದೇಶಕರು(ಆಡಳಿತ)) ಇವರ ಮುಖಾಂತರ ಸೂಕ್ತ ಕ್ರಮಕ್ಕಾಗಿ

(3) ಕಛೇರಿ ಪ್ರತಿ.